ಉಚ್ಚ ಶಿಕ್ಷಣಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೯೯,೮೬,೨೮,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೨೫,೦೦,೦೦೦ ರೂಪಾಯಿಗಳಿಗಿಂತ ಮಿರದ ಮೊತ್ತವನ್ನು ಮಂಜೂರು ಮಾಡುವುದು''

ಅಭಿಯಾಚನೆ ಕ್ರಮಾಂಕ: ೧೩, ಪ್ರಾಥಮಿಕ ಶಿಕ್ಷಣ.

''ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೯೩ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಪ್ರಾಥಮಿಕ ಶಿಕ್ಷಣಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೬೩೨,೬೮,೮೭,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.''

ಅಭಿಯಾಚನೆ ಕ್ರಮಾಂಕ ೧೪: ಸೆಕೆಂಡರಿ ಶಿಕ್ಷಣ:

''ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೯೩ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸೆಕೆಂಡರಿ ಶಿಕ್ಷಣಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೩೬೦,೭೬,೮೨,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ ೩೫: ರಾಜ್ಯ ವಿಧಾನ ಮಂಡಲ

''ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೯೩ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ರಾಜ್ಯ ವಿಧಾನಮಂಡಲಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೯೦೬,೧೩,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.''

ಅಭಿಯಾಚನೆ ಕ್ರಮಾಂಕ ೩೬: ನ್ಯಾಯಪರಿಪಾಲನೆ

''ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೯೩ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ನ್ಯಾಯ ಪರಿಪಾಲನೆಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೪೧,೪೧,೮೨,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.''

ಜಂಟಿ ಪರಿಶೀಲನಾ ಸಮಿತಿಯ ಕಾಲಾವಧಿಯನ್ನು ವಿಸ್ತರಿಸುವುದು.

ಶ್ರೀ ಬ್ಲೇಸಿಯಸ್ ಎಂ. ಡಿಸೌಜ (ಕಾನೂನು ಸಚಿವರು):- ಮಾನ್ಯ ಅಧ್ಯಕ್ಷರೇ, ೧೯೯೦ನೇ ಸಾಲಿನ ಹಿಂದೂ ಉತ್ತರಾಧಿಕಾರಿ (ಕರ್ನಾಟಕ ತಿದ್ದುಪಡಿ) ವಿಧೇಯಕದ ಬಗ್ಗೆ ರಚಿಸಲಾದ ಜಂಟಿ ಪರಿಶೀಲನಾ ಸಮಿತಿಗೆ ೧೯೯೩ನೇ ಜೂನ್ ತಿಂಗಳ ಅಂತ್ಯದವರೆಗೆ ಕಾಲಾವಧಿಯನ್ನು ವಿಸ್ತರಿಸಬೇಕೆಂದು ಕೊರುತ್ತೇನೆ.

ಛೇರ್ಮನ್:- ೧೯೯೦ನೇ ಸಾಲಿನ ಹಿಂದೂ ಉತ್ತರಾಧಿಕಾರ (ಕರ್ನಾಟಕ ತಿದ್ದುಪಡಿ) ವಿಧೇಯಕದ ಬಗ್ಗೆ ರಚಿಸಲಾದ ಜಂಟಿ ಪರಿಶೀಲನ ಸಮಿತಿಗೆ ೧೯೯೩ನೇ ಜೂನ್ ತಿಂಗಳ ಅಂತ್ಯದವರೆಗೆ ಕಾಲಾವಧಿಯನ್ನು ವಿಸ್ತರಿಸಲಾಗಿದೆ.

೧೯೯೨ರ ಜೂನ ತಿಂಗಳ ಅಂತ್ಯದವರೆಗೆ ಕಾಲಾವಧಿಯನ್ನು ವಿಸ್ತರಿಸಲಾಯಿತು.

ಚುಕ್ಕೆಗುರುತಿನ ಪ್ರಶ್ನೆಗಳಿಗೆ ಬಾಯಿಮಾತಿನ ಮೂಲಕ ನೀಡಲಾದ ಉತ್ತರಗಳು.

ಹರಿಜನ-ಗಿರಿಜನರ ದರಖಾಸ್ತ್ ಜಮೀನು ಮಾರಾಟ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ೩೪೧ (೨೧೪೪) ಶ್ರೀ ಕರಿಯಣ್ಣ (ಹೊಳೆಹೊನ್ನೂರು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದಲ್ಲಿ ಹರಿಜನ-ಗಿರಿಜನರ ದರಖಾಸ್ತು ಜಮೀನು ಮಾರಾಟದ ಕೇಸುಗಳು ಎಷ್ಟು ಬಾಕಿಇರುವುವು?

ಆ) ಬಾಕಿ ಇದ್ದರೆ ಎಷ್ಟು ವರ್ಷದಿಂದ ಇರುತ್ತವೆ? (ಜಿಲ್ಲಾವಾರು ವಿವರ ನೀಡುವುದು)

ಇ) ಹಾಗಿದ್ದಲ್ಲಿ, ಇದುವರೆವಿಗೆ ಈ ಕೇಸುಗಳು ಬಾಕಿ ಉಳಿಯಲು ಕಾರಣವೇನು?

ಶ್ರೀ ಮಲ್ಲಿಕಾರ್ಜುನ ಎಂ. ಖರ್ಗೆ (ಕಂದಾಯ ಸಚಿವರು):

ಅ) ೧,೩೭೦

ಆ) ಎಷ್ಟು ವರ್ಷಗಳಿಂದ ಬಾಕಿ ಇರುತ್ತದೆ ಎಂಬ ಬಗ್ಗೆ ಮಾಹಿತಿಯನ್ನು ಇದಕ್ಕೆ ಲಗತ್ತಿಸಿರುವ ಅನುಬಂಧದಲ್ಲಿ ಒದಗಿಸಿದೆ.

ಇ) ಇಂತಹ ಪ್ರಕರಣಗಳಲ್ಲಿ ಸೂಕ್ಷ್ಮ ದೃಷ್ಟಿಯಿಂದ ಪರಿಶೀಲಿಸಿ ನ್ಯಾಯ ಸಮ್ಮತವಾಗಿ, ಕರ್ನಾಟಕ ಪರಿಶಿಷ್ಟ ಜಾತಿ/ಪಂಗಡಗಳ ಕೆಲವು ಜಮಿನುಗಳ ಪರಭಾರೆ ನಿಷೇದ ಕಾಯ್ದೆ ೧೯೭೮ರ ಅಡಿಯಲ್ಲಿ ತೀರ್ಮಾನ ತೆಗೆದುಕೊಳ್ಳಬೇಕಾಗುತ್ತದೆ. ಈ ಪ್ರಕರಣಗಳಲ್ಲಿ ನ್ಯಾಯಾಲಯದಲ್ಲಿ ತೀರ್ಮಾನಗಳನ್ನು ತೆಗೆದುಕೊಳ್ಳಲು, ಸಾಕಷ್ಟು ಕಾಲಾವಕಾಶವು ತೆಗೆದುಕೊಳ್ಳುವುದು ಸಹಜವಾಗಿರುತ್ತದೆ ಮತ್ತು ವಿಳಂಬಕ್ಕೆ ಆಸ್ಪದ ಕೊಡುತ್ತದೆ, ಏಕೆಂದರೆ ಈ ಪ್ರಕರಣಗಳಲ್ಲಿ ದಾಖಲಾತಿಗಳನ್ನು ಒದಗಿಸಲು, ಸಾಕ್ಷಿಗಳನ್ನು ಕರೆತರಲು, ವಾದವನ್ನು ಮಂಡಿಸಲು, ಉಭಯತ್ರ ಪಾರ್ಟಿಗಳಿಗೂ ನ್ಯಾಯ ಸಮ್ಮತವಾಗಿ ಸಮಾನ ಕಾಲಾವಕಾಶ ಕೊಡಬೇಕಾಗುತ್ತದೆ. ಹಾಗೂ ನೊಂದ ಕಕ್ಷಿದಾರರು ಜಿಲ್ಲಾಧಿಕಾರಿಗಳಿಗೆ ಮೇಲ್ಮನವಿಯನ್ನು ಅಥವಾ ಉಚ್ಚ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್‌ನ್ನು ಸಲ್ಲಿಸುವುದರಿಂದ ಆ ನ್ಯಾಯಾಲಯಗಳಲ್ಲಿ ತೀರ್ಮಾನಗಳು ತೆಗೆದುಕೊಳ್ಳುವಲ್ಲಿ ಪ್ರಕರಣಗಳು ವಿಳಂಬವಾಗುವ ಸಂಭವವಿರುತ್ತದೆ.

ಅನುಭಂಧ

ಕ್ರಮ ಸಂಖ್ಯೆ	ಜಿಲ್ಲೆಯ ಹೆಸರು	ಬಾಕಿ ಇರುವ ಪ್ರಕರಣಗಳ	ಎಷ್ಟು ವರ್ಷಗಳಿಂದ ಬಾಕಿ ಇರುತ್ತದೆ
೧.	ಬೆಂಗಳೂರು (ನಗರ)	೯೨	೬ ತಿಂಗಳಿಂದ ೮ ವರ್ಷಗಳವರೆಗೆ
೨.	ಬೆಂಗಳೂರು (ಗ್ರಾಮಾಂತರ)	೨೧೪	೬ ತಿಂಗಳಿಂದ ೮ ವರ್ಷಗಳವರೆಗೆ
೩.	ಕೋಲಾರ	೪೦೫	೬ ತಿಂಗಳಿಂದ ೧೦ ವರ್ಷಗಳವರೆಗೆ